**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

8

ಇಲಾಖೆ / ವಿಷಯ : DEPARTMENT / SUBJECT: ಗೋಹತ್ಯೆ ನಿಷೇಧ ಕಾಯ್ದೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 7/1/21

# ಜ.18ರಿಂದ ಗೋಹತ್ಯೆ ನಿಷೇಧ ಕಾಯ್ದೆ ಜಾರಿ

ಬೆಂಗಳೂರು: ರಾಜ್ಯ ಸರ್ಕಾರ ತಿದ್ದುಪಡಿ ಮಾಡಿರುವ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಸುಗ್ರೀವಾಜ್ಞೆಗೆ (ಗೋಹತ್ಯೆ ನಿಷೇಧ) ಅಧಿಕೃತ ರಾಜ್ಯಪತ್ರ ಹೊರಡಿಸಲಾಗಿದ್ದು, ಜ.18ರಿಂದ ತಿದ್ದುಪಡಿ ಕಾಯ್ದೆ ಜಾರಿಗೆ ಬರಲಿದೆ. ಗೋಹತ್ಯೆ ನಿಷೇಧ ಕಾಯ್ದೆ ತಿದ್ದುಪಡಿಗೆ ರಾಜ್ಯ ಸರ್ಕಾರ ಕಳೆದ ಅಧಿವೇಶನದಲ್ಲಿ ರಾಜ್ಯ ವಿಧಾನ ಸಭೆಯಲ್ಲಿ ಪ್ರತಿಪಕ್ಷದ ವಿರೋಧದ ನಡುವೆಯೇ ಅಂಗೀಕಾರ ಪಡೆದುಕೊಂಡಿತ್ತು. ವಿಧಾನ ಪರಿಷತ್ತಿನಲ್ಲಿ ಈ ವಿಧೇಯಕ ಮಂಡನೆಗೆ ಸರ್ಕಾರ ಮುಂದಾಗಿದ್ದರೂ, ಪರಿಷತ್ ಸಭಾಪತಿ ಪದಚ್ಯುತಗೊಳಿಸುವ ನಿರ್ಣಯ ಮಂಡನೆ ಕುರಿತು ಗಲಾಟೆಯಾಗಿದ್ದರಿಂದ ಪರಿಷತ್ತಿನಲ್ಲಿ ವಿಧೇಯಕ ಮಂಡನೆಯಾಗಿರಲಿಲ್ಲ. ಹೀಗಾಗಿ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿತ್ತು. ರಾಜ್ಯಪಾಲರು ರಾಜ್ಯ ಸರ್ಕಾರದ ತಿದ್ದುಪಡಿ ಸುಗ್ರೀವಾಜ್ಞೆಗೆ ಅಂಕಿತ ಹಾಕಿದ್ದರು. ಈ ಹಿನ್ನೆಲೆಯಲ್ಲಿ ನೂತನ ಕಾಯ್ದೆ ಜಾರಿಗೆ ಅಧಿಕೃತ ಆದೇಶ ಹೊರಡಿಸಿದೆ.